# 3 ನೇ ಅಪರ ಮುಖ್ಯ ಮಹಾನಗರ ದಂಡಾಧಿಕಾರಿಗಳ ನ್ಯಾಯಾಲಯ,

# ಬೆಂಗಳೂರು ನಗರ.

# ಸಿಸಿ. 6601/2017

| | |
|---|---|
| ಸಾಕ್ಷಿದಾರರ ಹೆಸರು | ವಿಜಯಕುಮಾರ |
| ತಂದೆಯ ಹೆಸರು | ಲೇಟ್. ರಾಮಗುಜರನ |
| ವಯಸ್ಸು | 42 ವರ್ಷ |
| ಉದ್ಯೋಗ | ವ್ಯಾಪಾರ |
| ವಾಸ | ಮಂಗಳೂರು. |
| ಪ್ರಮಾಣೀಕರಿಸಿದ ದಿನಾಂಕ | 28/06/2023 |

**ಮುಖ್ಯ ವಿಚಾರಣೆ : ಹಿ.ಸ ಸ. ಅಭಿಯೋಜಕರವರಿಂದ :**

ನನಗೆ ಫಿರ್ಯಾದಿದಾರರ ಪರಿಚಯವಿದೆ. ಆರೋಪಿಯ ಪರಿಚಯ ಸಹ ಇದೆ. ಫಿರ್ಯಾದುದಾರಳು ಮತ್ತು ಆರೋಪಿಯ ಮಧ್ಯೆ ಯಾವ ವ್ಯವಹಾರವಾಗಿತ್ತು ಎಂದು ನನಗೆ ಗೊತ್ತಿಲ್ಲ. ಅವರ ನಡುವೆ ವ್ಯವಹಾರವಾದಾಗ ನಾನು ಹಾಜರಿರಲಿಲ್ಲ. ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಆರೋಪಿಯ ವಿರುದ್ಧ ಪೊಲೀಸರಿಗೆ ನಾನು ಯಾವುದೇ ಹೇಳಿಕೆ ಕೊಟ್ಟಿಲ್ಲ.

(ಈ ಹಂತದಲ್ಲಿ ಹಿ.ಸ.ಸ.ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಪರಿಶೀಲಿಸಿ ಅನುಮತಿ ನೀಡಲಾಯ್ತು)

**ಪಾಟೀ ಸವಾಲು : ಹಿ. ಸ. ಸ ಅಭಿಯೋಜಕರವರಿಂದ :**

2. ಆರೋಪಿ ಮತ್ತು ಫಿರ್ಯಾದಿದಾರರ ಮಧ್ಯೆ ಜಮೀನು ಖರೀದಿಯ ವ್ಯವಹಾರವಿತ್ತು ಎಂದರೆ ಸರಿಯಲ್ಲ. ಫಿರ್ಯಾದಿದಾರರು ಆರೋಪಿತನಿಗೆ ರೂ.3,70,000/- ಮೊತ್ತದ ಎರಡು ಚೆಕ್ ಗಳನ್ನು ಮತ್ತು 3 ಖಾಲಿ ಚೆಕ್ ಗಳನ್ನು ಕೊಟ್ಟಿದ್ದರು ಎಂದರೆ ಸರಿಯಲ್ಲ. ಆಗಸ್ಟ

2014 ರಲ್ಲಿ ಆರೋಪಿಯು ಫಿರ್ಯಾದಿಯನ್ನು ಭೇಟಿ ಮಾಡಿ ಒಪ್ಪಂದ ರದ್ದಿಯಾತಿ ಪತ್ರಕ್ಕೆ ಸಹಿ ಮಾಡುವಂತೆ ಮತ್ತು ಫಿರ್ಯಾದಿದಾರರಿಗೆ ಕೊಡಬೇಕಾಗಿದ್ದ ರೂ.5,75,00,000/- ಹಣವನ್ನು ಆರ್.ಟಿ.ಜಿ.ಎಸ್, ಮೂಲಕ ಹಿಂತಿರುಗಿಸುವುದಾಗಿ ವಾಗ್ದಾನ ಮಾಡಿದ್ದರು ಎಂದರೆ ಸರಿಯಲ್ಲ. ದಿನಾಂಕ 25/08/2014 ರಂದು ಫಿರ್ಯಾದಿದಾರಳು ಮತ್ತು ಚಂದ್ರಶೇಖರ ಭಟ ರವರು ಉಪನೊಂದಣಾಧಿಕಾರಿಯವರ ಕಛೇರಿಯಲ್ಲಿ ರದ್ದಿಯಾತಿ ಪತ್ರಕ್ಕೆ ಸಹಿ ಮಾಡಿದ್ದರು ಎಂದರೆ ಸರಿಯಲ್ಲ. ಆರೋಪಿಯು ರೂ. 1,00,00,000/- ಹಣವನ್ನು ಮಾತ್ರ ವರ್ಗಾವಣೆ ಮಾಡಿ ಉಳಿದ ಹಣವನ್ನು ತದನಂತರ ಕೊಡುತ್ತೇನೆ ಎಂದು ಹೇಳಿದ್ದರು ಎಂದರೆ ಸರಿಯಲ್ಲ. ಆರೋಪಿಯು ರೂ.4,75,00,000/- ಮೊತ್ತಕ್ಕೆ ಎರಡು ಚೆಕ್ ಗಳನ್ನು ನೀಡಿದ್ದರು ಎಂದರೆ ಸರಿಯಲ್ಲ. ಆರೋಪಿಯು ಫಿರ್ಯಾದುದಾರರು ಕೊಟ್ಟಿದ್ದ 3 ಚೆಕ್ ಗಳ ಪೈಕಿ ಒಂದನ್ನು ದುರುಪಯೋಗಪಡಿಸಿಕೊಂಡಿರುತ್ತಾನೆ ಎಂದರೆ ಸರಿಯಲ್ಲ. ಒಂದೊಮ್ಮೆ ಫಿರ್ಯಾದಿದಾರಳಾಗಲಿ ಅಥವಾ ಚಂದ್ರಶೇಖರ ಭರ ರವರಾಗಲೀ ಆರೋಪಿಯ ವಿರುದ್ಧ ಪ್ರಕರಣ ದಾಖಲಿಸಿದರೇ ಅವರಿಬ್ಬರನ್ನು ಕೊಲೆ ಮಾಡುವುದಾಗಿ ಬೆದರಿಕೆ ಹಾಕಿರುತ್ತಾನೆ ಎಂದರೆ ಸರಿಯಲ್ಲ. ತನಿಖಾಧಿಕಾರಿ ನನ್ನನ್ನು ವಿಚಾರಣೆ ಮಾಡಿದಾಗ ಈ ಓದಿ ಹೇಳಿದ ರೀತಿಯಲ್ಲಿ ಹೇಳಿಕೆ ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರಿಗೆ ತೋರಿಸಿದ ಹೇಳಿಕೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ನಾನು ಪ್ರಕರಣವನ್ನು ರಾಜಿ ಮಾಡಿಕೊಂಡಿದ್ದೇನೆಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.**

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯ್ತು)

**ಓ.ಹೇ.ಕೇ.ಸ.ಇದೆ**

**3 ನೇ ಎ.ಸಿ.ಎಮ್.ಎಮ್.ನ್ಯಾ.**

**ಬೆಂಗಳೂರು.**